ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಯವರು) :—

1. ದಾವಣಗೆರೆ ನಗರಕ್ಕೆ ಸಮಗ್ರ ನೀರು ಸರಬರಾಜು ಒದಗಿಸುವ 2ನೇ ಹಂತದ ಯೋಜನೆಗೆ ಸರ್ಕಾರದಿಂದ 18.12.98ರಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿದೆ. ಈ ಯೋಜನೆಯ ಅಂದಾಜು ವೆಚ್ಚ ರೂ.4009.00 ಲಕ್ಷಗಳು. ಈ ಯೋಜನೆಗೆ ಜೂನ್ 2001ರ ಅಂತ್ಯದವರೆಗೆ ರೂ.1415.00 ಲಕ್ಷಗಳು ವಿರ್ಚಾಗಿರುತ್ತದೆ.

2. ಸದರಿ ಯೋಜನೆಯನ್ನು ಪ್ಯಾಕೇಜ್ ಟೆಂಡರ್ ಆಧಾರದ ಮೇಲೆ ಕೈಗೆತ್ತಿಕೊಳ್ಳಲಾಗಿದ್ದು, ಆಗಸ್ಟ್ 99 ರಿಂದ ಕಾಮಗಾರಿಯು ಪ್ರಗತಿಯಲ್ಲಿದೆ. ಜೂನ್ 2001ರವರೆಗೆ ಶೇಕಡ 50ರಷ್ಟು ಭೌತಿಕ ಪ್ರಗತಿಯನ್ನು ಹಾಗೂ ಶೇಕಡ 40ರಷ್ಟು ಆರ್ಥಿಕ ಪ್ರಗತಿಯನ್ನು ಸಾಧಿಸಲಾಗಿದೆ. ಸದರಿ ಯೋಜನೆಯ ಎಲ್ಲಾ ಕಾಮಗಾರಿಗಳನ್ನು 3ನೇ ಪಾರ್ಟಿಯಿಂದ ತಪಾಸಣೆಗೆ ಒಳಪಡಿಸಲಾಗಿದ್ದು, ಯಾವುದೇ ಕಳಪೆ ಕಾಮಗಾರಿಗಳು ನಡೆದಿರುವುದಿಲ್ಲ.

3. ಸದರಿ ಯೋಜನೆಯ ಕಾಮಗಾರಿಗಳನ್ನು 2002-03ನೇ ಸಾಲಿನಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ.

4. ಈ ಯೋಜನೆಯನ್ನು ಡಿಸೆಂಬರ್ 2002ರಲ್ಲಿ ಪೂರ್ಣಗೊಳಿಸಲಾಗುವುದು.

ರಾಜ್ಯದಲ್ಲಿ ಆಡಳಿತ ಸುಧಾರಣಾ ಕಾರ್ಯಕ್ರಮಗಳು

2421 (2867) ಸಭಾಪತಿ ಯು.ಆರ್. (ಉಡುಪಿ) :— ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ರಾಜ್ಯದ ಆಡಳಿತದಲ್ಲಿ ಆರ್ಥಿಕ ಸಂಕಷ್ಟಗಳನ್ನು ನಿಗ್ರಹಿಸುವ ಸಲುವಾಗಿ ಆಡಳಿತ ಸುಧಾರಣೆಗಳನ್ನು ಜಾರಿಗೆ ತರಲು ಸರ್ಕಾರ ತೆಗೆದುಕೊಂಡ ವಿವಿಧ ಕಾರ್ಯಕ್ರಮಗಳ ವಿವರಗಳನ್ನು ನೀಡುವುದು.

2) ವಿವಿಧ ಇಲಾಖೆಗಳಲ್ಲಿ ಇರತಕ್ಕ ಹೆಚ್ಚುವರಿ ಸಿಬ್ಬಂದಿಗಳ ಕಡಿತಕ್ಕೆ ಸರ್ಕಾರ ಯೋಚಿಸಿದೆಯೇ?

3) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಯವರು) :—

1) ರಾಜ್ಯ ಸರ್ಕಾರವು ಆಡಳಿತ ಸುಧಾರಣಾ ಆಯೋಗವನ್ನು ನೇಮಕಾತಿ ಮಾಡಿದೆ. ಆಡಳಿತ ಸುಧಾರಣಾ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ ಮಧ್ಯಂತರ

ವರದಿಯಲ್ಲಿ ಮಾಡಿರುವ ಕೆಲವು ಶಿಫಾರಸ್ಸುಗಳು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವಲ್ಲಿ ಪರಿಣಾಮ ಬೀರುತ್ತವೆ. ರಾಜ್ಯ ಸರ್ಕಾರಿ ನೌಕರರ ಸಂಖ್ಯೆಯನ್ನು ಕಡಿತಗೊಳಿಸುವುದು, ಮರು ಹಂಚಿಕೆ ಮಾಡುವುದು, ಕೆಲವೊಂದು ಇಲಾಖೆಗಳನ್ನು ವಿಲೀನಗೊಳಿಸುವುದು, ವರ್ಗಾವಣೆಗಳ ಸಂಖ್ಯೆಯನ್ನು ಕಡಿಮೆ ಮಾಡುವುದು, ಇವು ಆಯೋಗದ ಮುಖ್ಯ ಶಿಫಾರಸ್ಸುಗಳು. ಆಡಳಿತ ಸುಧಾರಣಾ ಆಯೋಗದ ವರದಿಯನ್ನು ಸರ್ಕಾರವು ಪರಿಶೀಲಿಸುತ್ತಿದೆ.

2) ದಿನಾಂಕ: 20.05.1999ರ ಸರ್ಕಾರದ ಆದೇಶ ಸಂಖ್ಯೆ ಸಿ.ಆ.ಸು.ಇ. 07 ಈಕಾಆ 98ರಲ್ಲಿ ಈಗಾಗಲೇ 20142 ಹುದ್ದೆಗಳನ್ನು ರದ್ದುಗೊಳಿಸಲಾಗಿದೆ. ಇದಲ್ಲದೇ ವಿವಿಧ ಇಲಾಖೆಗಳಲ್ಲಿರುವ ಶೇ.80ರಷ್ಟು ಖಾಲಿ ಹುದ್ದೆಗಳನ್ನು ರದ್ದುಗೊಳಿಸುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ. ಅಲ್ಲದೇ ಆಡಳಿತ ಸುಧಾರಣಾ ಆಯೋಗದ ವರದಿಯನ್ನು ಜಾರಿಗೊಳಿಸಿದ ನಂತರ ಮತ್ತಷ್ಟು ಹುದ್ದೆಗಳು ರದ್ದಾಗುವ ಸಂಭವವಿದೆ.

ರಾಜ್ಯದಲ್ಲಿ ಐ.ಎ.ಎಸ್. ಅಧಿಕಾರಿಗಳ ಭ್ರಷ್ಟಾಚಾರ.

2422 (3404) ಸಭಾಪತಿ ಯು.ಆರ್. (ಉಡುಪಿ) :— ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ರಾಜ್ಯದಲ್ಲಿ ಇತ್ತೀಚಿನ ವರ್ಷದಲ್ಲಿ ಐ.ಎ.ಎಸ್. ಅಧಿಕಾರಿಗಳಲ್ಲಿ ಭ್ರಷ್ಟಾಚಾರ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) 1999-2000, 2000-2001ರ ಸಾಲಿನಲ್ಲಿ ಎಷ್ಟು ಮಂದಿ ಐ.ಎ.ಎಸ್. ಅಧಿಕಾರಿಗಳ ಮೇಲೆ ಕ್ರಮ ಕೈಗೊಳಲಾಗಿದೆ.

ಇ) ಅಕ್ರಮ ಸಂಪತ್ತು ಹಾಗೂ ಆಪರ (ನಿಗದಿತ ಆದಾಯಕ್ಕಿಂತಲೂ ಹೆಚ್ಚು) ಸಂಪತ್ತು ಹೊಂದಿರತಕ್ಕ ಐ.ಪಿ.ಎಸ್. ಹಾಗೂ ಐ.ಎ.ಎಸ್. ಅಧಿಕಾರಿಗಳನ್ನು ಗುರುತಿಸಿ ಅವರ ಮೇಲೆ ಲೋಕಾಯುಕ್ತ ಮೋದಲಾದ ಇಲಾಖೆಗಳ ಮೂಲಕ ಸಮರ್ಪಣಾ ದಾಳಿಗಳನ್ನು ಮಾಡಲಾಗಿದೆಯೇ (ವಿವರಗಳನ್ನು ನೀಡುವುದು)

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಯವರು) :—

ಅ) ಇಲ್ಲ

ಆ) 1

ಇ) ಕರ್ನಾಟಕ ಲೋಕಾಯುಕ್ತಕ್ಕೆ ಬಂದ ದೂರುಗಳನ್ನು ಪರಿಶೀಲಿಸಿದ ಲೋಕಾಯುಕ್ತವು ಅಕ್ರಮ ಸಂಪತ್ತು ಹೊಂದಿದ್ದಾರೆನ್ನಲಾದ ಐ.ಎ.ಎಸ್. ಐ.ಪಿ.ಎಸ್. ಅಧಿಕಾರಿಗಳ ಮನೆ : ಕಛೇರಿಯ ಮೇಲೆ ತಪಾಸಣಾ ದಾಳಿಗಳನ್ನು ಮಾಡುತ್ತವೆ. 2000ನೇ